# **ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ 162 ಗ್ರಾಪಂಸಿ 2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:05-09-2017

## **ಸುತ್ತೋಲೆ**

**ವಿಷಯ** ಸೇವೆಯಲ್ಲಿರುವಾಗಲೇ ಮರಣ ಹೊಂದಿದ ಗ್ರಾಮ ಪಂಚಾಯತಿ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡುವ ಬಗ್ಗೆ.

**ಉಲ್ಲೇಖ:**

1. ಸರ್ಕಾರಿ ಆದೇಶ ಸಂಖ್ಯೆ: ಆರ್‌ಡಿಪಿ 49 ಜಡ್‌ಪಿಟಿ 95 ದಿನಾಂಕ: 19-05-1995.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 22 ಗ್ರಾಪಂಸಿ 2014 ದಿನಾಂಕ:10-09-2014.

****

ಉಲ್ಲೇಖ (1) ರ ಸರ್ಕಾರದ ಸುತ್ತೋಲೆಯಲ್ಲಿ ಮಂಡಲ/ ಗ್ರಾಮ ಪಂಚಾಯತಿಯಲ್ಲಿ ಕೆಲಸ ಮಾಡುತ್ತಿರುವ ನೌಕರರು ಸರ್ಕಾರಿ ನೌಕರರುಗಳಲ್ಲ. ಇವರುಗಳು ಗ್ರಾಮ ಪಂಚಾಯತಿಗಳಿಂದ ನೇಮಿಸಲ್ಪಟ್ಟ ನೌಕರರಾಗಿದ್ದು, ಇಂತಹ ದಿವಂಗತ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡುವ ವಿಷಯವು ಆಯಾಯ ಗ್ರಾಮ ಪಂಚಾಯತಿಗೆ ಸಂಬಂಧಿಸಿದೆ. ಗ್ರಾಮ ಪಂಚಾಯತಿಯು ಒಪ್ಪಿದ್ದಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆಯನ್ನು ಪಡೆದು ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. **ರಾಜ್ಯದ ಕೆಲವು ಗ್ರಾಮ ಪಂಚಾಯತಿಗಳು ಸೇವೆಯಲ್ಲಿರುವಾಗಲೇ ಮರಣ ಹೊಂದಿದ ಗ್ರಾಮ ಪಂಚಾಯತಿ ನೌಕರರ ಅವಲಂಬಿತರು ಅನುಕಂಪದ ಆಧಾರದ ಮೇಲೆ ನೇಮಕಾತಿ ಹೊಂದಲು ಅರ್ಹರಿದ್ದರೂ, ನೇಮಕಾತಿ ಮಾಡದೆ ಖಾಲಿ ಇರುವ ಹುದ್ದೆಗೆ ಬೇರೆ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ, ನೇಮಕಾತಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇಂತಹ ಪ್ರಕರಣಗಳನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ.**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 112 ರಡಿಯಲ್ಲಿ ಗ್ರಾಮ ಪಂಚಾಯಿತಿಗಳಿಗೆ ಸಿಬ್ಬಂದಿ ವರ್ಗದವರ ಮಾದರಿ, ವೇತನ ಶ್ರೇಣಿಗಳು ಮತ್ತು ನೇಮಕಾತಿ ನಿಯಮಗಳನ್ನು ನಿಗಧಿಪಡಿಸಲು ಸರ್ಕಾರಕ್ಕೆ ಅಧಿಕಾರವಿರುತ್ತದೆ. ಇದರನ್ವಯ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 112 ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ರಾಜ್ಯದಲ್ಲಿನ ಗ್ರಾಮ ಪಂಚಾಯತಿಗಳ ಸಿಬ್ಬಂದಿ ಸ್ವರೂಪ, ವೇತನ ಮತ್ತು ನೇಮಕಾತಿ ವಿಧಾನವನ್ನು ಸರ್ಕಾರವು ನಿರ್ದಿಷ್ಟಪಡಿಸಿ ಉಲ್ಲೇಖ(2) ರಲ್ಲಿ ಆದೇಶಿಸಲಾಗಿದೆ. ಸದರಿ ಅಧಿನಿಯಮದ ಪ್ರಕರಣ 113 ರಂತೆ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಪೂರ್ವಾನುಮೋದನೆ ಪಡೆದು ಗ್ರಾಮ ಪಂಚಾಯಿತಿಗಳು ತನ್ನ ನೌಕರರನ್ನು ನೇಮಕಾತಿ ಮಾಡಿಕೊಳ್ಳಬಹುದಾಗಿದ್ದು, ಗ್ರಾಮ ಪಂಚಾಯತಿಗಳು ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರವಾಗಿರುತ್ತವೆ.

**ಗ್ರಾಮ ಪಂಚಾಯತಿ ನೌಕರನು ಸೇವೆಯಲ್ಲಿರುವಾಗಲೇ ಮರಣ ಹೊಂದಿದಲ್ಲಿ ಅವರ ಅವಲಂಬಿತರು ಅನುಕಂಪದ ಆಧಾರದ ಮೇಲೆ ನೇಮಕಾತಿ ಹೊಂದಲು ಅರ್ಹರಿದ್ದಲ್ಲಿ, ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಹುದ್ದೆಗೆ ಬೇರೆ ಅಭ್ಯರ್ಥಿಗಳನ್ನು ನೇಮಿಸಿಕೊಳ್ಳುವುದರ ಬದಲು, ಸೇವೆಯಲ್ಲಿರುವಾಗಲೇ ಮರಣ ಹೊಂದಿದ ಅವರ ಅವಲಂಬಿತರನ್ನು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆಯನ್ನು ಪಡೆದು ಗ್ರಾಮ ಪಂಚಾಯತಿಗಳು ಅನುಕಂಪದ ಆಧಾರದ ಮೇಲೆ ನೇಮಿಸಲು ಅಗತ್ಯ ಕ್ರಮ ವಹಿಸುವಂತೆ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ನಿರ್ದೇಶನ ನೀಡಿದೆ.**

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.